ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸರ್ಕಾರದ ಇಂಜೀನಿಯರಿಂಗ್ ಕಾಲೇಜಿನ ಅಧ್ಯಾಪಕರುಗಳಿಗೆ ಎ.ಐ.ಸಿ.ಟಿ.ಇ 7ನೇ ವೇತನ ಆಯೋಗದ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

938 (1221) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಅಧ್ಯಾಪಕರುಗಳಿಗೆ ಎ.ಐ.ಸಿ.ಟಿ.ಇ 7ನೇ ವೇತನ ಆಯೋಗದ ವರದಿಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ವರದಿಯನ್ನು ದಿನಾಂಕ: 31-03-2020ರೊಳಗೆ ಅನುಷ್ಠಾನಗೊಳಿಸದಿದ್ದರೆ ಕೇಂದ್ರದಿಂದ ಶೇಕಡಾ 50 ರಷ್ಟು ಅನುದಾನವನ್ನು ನೀಡಲಾಗುವುದಿಲ್ಲವಾ ದ್ದರಿಂದ ಪೂರ್ತಿ ಹೊರೆ ರಾಜ್ಯ ಸರ್ಕಾರದ ಮೇಲೆ ಬೀಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಯುಜಿಸಿ 7ನೇ ವೇತನವನ್ನು ಈಗಾಗಲೇ ಪದವಿ ಕಾಲೇಜುಗಳಿಗೆ ಸರ್ಕಾರ ನೀಡಿದ್ದು, ಇಂಜಿನಿಯರಿಂಗ್ ಕಾಲೇಜುಗಳಿಗೆ ನೀಡದಿರುವ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ; (ವಿವರವಾದ ಮಾಹಿತಿಯನ್ನು ನೀಡುವುದು)

(ಈ) ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಅಧ್ಯಾಪಕರುಗಳಿಗೆ 2011 ಮಾರ್ಚ್ ಮಾಹೆಯಲ್ಲಿ ಎ.ಐ.ಸಿ.ಟಿ.ಇ 6ನೇ ವೇತನ ಅನುಷ್ಠಾನಗೊಳಿಸಿದ್ದು ಶೇಕಡಾ 33 ರಷ್ಟು ಹಿಂಬಾಕಿಯನ್ನು ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುತ್ತದೆ? (ವಿವರವಾದ ಮಾಹಿತಿ ನೀಡುವುದು)